# ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನ



ಗದಗ ಸಂಜೆ ವಾರ್ತೆ :

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಈ ಬಾರಿ ಕರ್ನಾಟಕ ಸರ್ಕಾರ ಭಾರತದ ಸಂವಿಧಾನದ ಆಶಯಗಳನ್ನ ಮೌಲ್ಯಗಳನ್ನು ಇನ್ನಷ್ಟು ಸಾರ್ವಜನಿಕ ವಲಯದಲ್ಲಿ ಜಾಗ್ರತಗೊಳಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ವರ್ಗದ ಜನರೊಂದಿಗೆ ಸಂವಿಧಾನ ಪೀಠಿಕೆಯನ್ನು ವಾಚನ ಮಾಡುವ ಮೂಲಕ ಅರಿವು ಮೂಡಿಸುವ ಕಾರ್ಯ ಅತ್ಯಂತ ಅರ್ಥಪೂರ್ಣವಾದದ್ದು. ಭಾರತದ ಪ್ರತಿಯೊಬ್ಬ ಪ್ರಜೆಗೂ ಸ್ವಾಭಿಮಾನದ ಬದುಕನ್ನ ಕಟ್ಟಿಕೊಳ್ಳಲು ಸಂವಿಧಾನ ಅವಕಾಶ ಮಾಡಿಕೊಟ್ಟಿದೆ.

ಈ ಬಾರಿ ಕರ್ನಾಟಕ ಸರ್ಕಾರ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದಲ್ಲಿ ವಿಧಾನಸೌಧ ಮುಂಭಾಗ ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನ ಮಾಡುವ ಮೂಲಕ ಸಂವಿಧಾನದ ಮಹತ್ವ ಕುರಿತು ಮುಖ್ಯಮಂತ್ರಿಗಳು ನಾಡಿನ ಜನರಿಗೆ ವಿಶೇಷ ಸಂದೇಶ ನೀಡಿದರು. ಸಂವಿಧಾನ ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ತತ್ವದ ಅಡಿ ರಚನೆಯಾಗಿದ್ದು ಅದರ ಸದುಪಯೋಗ ಪಡೆದುಕೊಂಡು ಪ್ರತಿಯೊಬ್ಬ ನಾಗರಿಕರು ಸ್ವಾಭಿಮಾನದ ಬದುಕನ್ನ ಕಳೆಯಬೇಕೆಂದು ಹೇಳಿದರು. ಜೊತೆಗೆ ಭಾರತದ ಪ್ರತಿಯೊಬ್ಬ ಪ್ರಜೆಯು ದೇಶಾಭಿಮಾನವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಸಭಾಪತಿಗಳಾದ ಬಸವರಾಜ ಹೊರಟ್ಟಿ ಮಾತನಾಡಿ ಈ ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣವಾದದ್ದು ಹಾಗೂ ದೇಶದ ಪ್ರತಿಯೊಬ್ಬ ಪ್ರಜೆಯು ದೇಶಾಭಿಮಾನ ಬೆಳೆಸಿಕೊಂಡು ಒಟ್ಟಾಗಿ ಒಂದಾಗಿ ಬಾಳಲು ಉತ್ತಮ ಸಂದೇಶ ಕೊಡುವ ಕಾರ್ಯಕ್ರಮ ಇದಾಗಿದೆ. ಇಂತಹ ಮಹತ್ವದ ಕಾರ್ಯಕ್ರಮ ಆಯೋಜಿಸಿದ ಕರ್ನಾಟಕ ಸರ್ಕಾರಕ್ಕೆ ವಿಶೇಷ ಅಭಿನಂದನೆಗಳನ್ನ ಸಲ್ಲಿಸುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ್, ಸಮಾಜ ಕಲ್ಯಾಣ ಸಚಿವರಾದ ಡಾ. ಎಚ್. ಸಿ ಮಹದೇವಪ್ಪ, ಗೃಹ ಸಚಿವರಾದ ಡಾ. ಎಚ್.ಜಿ ಪರಮೇಶ್ವರ, ಇಂಧನ ಸಚಿವರಾದ ಕೆ .ಜಿ ಜಾರ್ಜ್, ಆಹಾರ ಮತ್ತು ನಾಗರಿಕ ಇಲಾಖೆ ಸಚಿವರಾದ ಕೆ.ಎಚ್. ಮುನಿಯಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ .ತಂಗಡಗಿ ಸೇರಿದಂತೆ ವಿವಿಧ ಖಾತೆಗಳ ಸಚಿವರು, ಶಾಸಕರು , ವಿಧಾನ ಪರಿಷತ್ ಸದಸ್ಯರು ಭಾಗವಹಿಸಿದ್ದರು. ಕರ್ನಾಟಕ ಸರ್ಕಾರದ ಕರೆಗೆ ಓಗೊಟ್ಟು ರಾಜ್ಯಾದ್ಯಂತ ವಿವಿಧ ಕ್ಷೇತ್ರದ ಮಹನೀಯರು, ಸಾಧಕರು, ವಿದ್ಯಾರ್ಥಿಗಳು, ಜನಪ್ರತಿನಿಧಿಗಳು, ಧಾರ್ಮಿಕ ಗುರುಗಳು, ಈ ಅರ್ಥಪೂರ್ಣ ಕಾರ್ಯಕ್ರಮದಲ್ಲಿ ಭಾರತದ ಸಂವಿಧಾನ ಪೀಠಿಕೆ ಜಾಗತಿಕ ವಾಚನದಲ್ಲಿ ಭಾಗವಹಿಸಿದ್ದರು .

ಆ ಮೂಲಕ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಂದು ನಾಡಿಗೆ ಒಂದು ವಿಶೇಷ ಸಂದೇಶವನ್ನ ಕಳಿಸುವ ಮೂಲಕ ಕಾರ್ಯಕ್ರಮಕ್ಕೆ ಕಳೆಯನ್ನು ಕಟ್ಟಿಕೊಡುವಲ್ಲಿ ಕರ್ನಾಟಕ ಸರ್ಕಾರ ವಿಶೇಷ ಕಾರ್ಯಕ್ರಮ ಆಯೋಜಿಸಿದ್ದು ಹೆಮ್ಮೆಯ ಸಂಗತಿಯಾಗಿದೆ.